ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (182)255
ಸದಸ್ಯರ ಹೆಸರು : ಶ್ರೀ ಸಂಪಂಗಿ .ಎನ್ (ಬಾಗೇಪಲ್ಲಿ)
ಉತ್ತರಿಸುವ ಸಚಿವರು : (ಶ್ರೀ ಬಿ.ಎಸ್.ಯಡಿಯೂರಪ್ಪ)
: ಮಾನ್ಯ ಮುಖ್ಯಮಂತ್ರಿಗಳು

ಅ) ಕರ್ನಾಟಕ ರಾಜ್ಯದ ಪ್ರಪ್ರಥಮ ಮುಖ್ಯಮಂತ್ರಿಯಾಗಿದ್ದ ಸನ್ಮಾನ್ಯ ದಿವಂಗತ ಕೆ.ಸಿ.ರೆಡ್ಡಿಯವರು ಹಿಂದುಳಿದ ವರ್ಗದ ಜನತೆಯ ಆಶಾಕಿರಣ, ಇವರ ಸವಿನೆನಪಿಗಾಗಿ ಪುತ್ಥಳಿಯನ್ನು ವಿಧಾನಸೌಧದ ಮುಂದೆ ಸ್ಥಾಪಿಸುವ ಯೋಜನೆಯು ಸರ್ಕಾರದ ಮುಂದಿದೆಯೇ;

ಇಲ್ಲ.

ಆ) ಹಾಗಿದ್ದಲ್ಲಿ, ಈ ದಿಸೆಯಲ್ಲಿ ಸರ್ಕಾರ ಕೈಗೊಳ್ಳಲುದ್ದೇಶಿಸಿರುವ ಕ್ರಮವೇನು ಹಾಗೂ ಇದಕ್ಕಾಗಿ ತಗಲುವ ಅಂದಾಜು ವೆಚ್ಚವೆಷ್ಟು?

ದಿವಂಗತ ನೇತಾಜಿ ಸುಭಾಶ್ ಚಂದ್ರ ಬೋಸ್ ಹಾಗೂ ಎಸ್.ನಿಜಲಿಂಗಪ್ಪ ರವರುಗಳ ಸ್ಮಾರಕಗಳನ್ನು ವಿಧಾನಸೌಧದ ಆಸುಪಾಸಿನಲ್ಲಿ ಸ್ಥಾಪಿಸುವುದಕ್ಕೆ ಸಂಬಂಧಿಸಿದಂತೆ ಉಚ್ಚ ನ್ಯಾಯಾಲಯದಲ್ಲಿ ದಾಖಿಲಾಗಿದ್ದ ಪ್ರಕರಣದಲ್ಲಿ ವಿಧಾನಸೌಧದ ಸುತ್ತಮುತ್ತ ಈ ರೀತಿಯ ಪ್ರತಿಮೆ, ಪುತ್ಥಳಿ ಇತ್ಯಾದಿಗಳನ್ನು ಸ್ಥಾಪಿಸಂದತೆ ನಿರ್ಬಂಧಗಳನ್ನು ವಿಧಿಸಿ ರಾಜ್ಯ ಉಚ್ಚ ನ್ಯಾಯಾಲಯವು 1999ನೇ ಸಾಲಿನಲ್ಲಿ ತೀರ್ಪು ನೀಡಿರುತ್ತದೆ. ಈ ಕಾರಣದಿಂದಾಗಿ ಪ್ರತಿಮೆ ಸ್ಥಾಪನೆ ಪ್ರಶ್ನೆ ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (122) 256
ಸದಸ್ಯರ ಹೆಸರು : ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್.
ಉತ್ತರಿಸುವ ಸಚಿವರು : ಶ್ರೀ ಬಿ.ಎಸ್.ಯಡಿಯೂರಪ್ಪ
ಮಾನ್ಯ ಮುಖ್ಯಮಂತ್ರಿಗಳು

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಶಿಕ್ಷಣ ತಜ್ಞರಾದ ದಿ. ಡಾ: ಹೆಚ್.ಎನ್.ನರಸಿಂಹಯ್ಯರವರ ಸವಿ ನೆನಪಿಗಾಗಿ ಒಂದು ಕಲಾ ಭವನ ಸಮುದಾಯವನ್ನು ನಿರ್ಮಾಣ ಮಾಡಲು ಅಂದಾಜು ವೆಚ್ಚ ಹಿಂದಿನ ಸರ್ಕಾರ ಮಂಡಿಸಿದ ರೂ.2.00 ಕೋಟಿ ಆಗಲಿದ್ದು ಈ ಹಣವನ್ನು ಆಯವ್ಯಯದಲ್ಲಿ ಘೋಷಣೆ ಮಾಡಿ ಪ್ರಕಟಿಸಿದ್ದು ನಿಜವಲ್ಲವೇ;

ಹೌದು.

ಆ) ಹಾಗಿದ್ದಲ್ಲಿ, ಈ ಕಲಾ ಭವನ ಸಮುದಾಯವನ್ನು ನಿರ್ಮಿಸಲು ಅನುದಾನ ಮಂಜೂರು ಮಾಡಿ ಕಾಮಗಾರಿ ಪೂರ್ತಿಗೊಳಿಸಲು ಸರ್ಕಾರವು ಕೈಗೊಳ್ಳುವ ಕ್ರಮವೇನು?

ಉದ್ದೇಶಿತ ಕಟ್ಟಡದ ಕಾಮಗಾರಿ ನಿರ್ಮಿಸಲು ರೂ.1.25 ಕೋಟಿಗಳ ಅಂದಾಜು ಪಟ್ಟಿಗೆ ಸರ್ಕಾರ ಆಡಳಿತಾತ್ಮಕ ಅನುಮೋದನ ನೀಡಿದೆ. ಸರ್ಕಾರದ ಆದೇಶ ಸಂಖ್ಯೆ, ಕಸಂವಾಪ್ರ 234 ಕನಧ 2007, ದಿನಾಂಕ: 29–11–2007 ರನ್ವಯ ರೂ.1.00 ಕೋಟಿಗಳನ್ನು ಜಿಲ್ಲಾಧಿಕಾರಿಗಳು, ಕೋಲಾರ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲಾಗಿತ್ತು. ಗೌರಿಬಿದನೂರು ತಾಲ್ಲೂಕು ಪ್ರಸ್ತುತ ಚಿಕ್ಕಬಳ್ಳಾಪುರ ಜಿಲ್ಲೆ ವ್ಯಾಪ್ತಿಗೆ ಬರಲಿದ್ದು, ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳಿಗೆ ಹಣ ವರ್ಗಾಯಿಸಲಾಗಿದೆ. ಕಾಮಗಾರಿ ಪ್ರಾರಂಭಿಸುವಂತೆ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (124)258
ಮಾನ್ಯ ಸದಸ್ಯರ ಹೆಸರು : ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿದಿದನೂರು)
ಉತ್ತರಿಸಬೇಕಾದವರು : (ಶ್ರೀ ಕಟ್ಟಾಸುಬ್ರಮಣ್ಯನಾಯ್ಡು)
: ಮಾನ್ಯ ಅಬಕಾರಿ ಸಚಿವರು

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ವ್ಯಾಪಕವಾಗಿ ಆಂಧ್ರ ಗಡೀ ಭಾಗದಲ್ಲಿ ಹೆಂಡ ಮಾರಾಟ ಮಾಡಿ ಜನರ ಆರೋಗ್ಯವನ್ನು ಹದಗೆಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಹೌದು.

ಆ) ಹಾಗಿದ್ದಲ್ಲಿ, ಇದರ ಬಗ್ಗೆ ಇಲಾಖಾ ಅಧಿಕಾರಿಗಳು ಕ್ರಮ ಕೈಗೊಳ್ಳಲು ನಿರ್ಲಕ್ಷ ವಹಿಸುತ್ತಿದ್ದು, ಈ ಅಧಿಕಾರಿಗಳ ವಿರುದ್ಧ ಸರ್ಕಾರವು ಕೈಗೊಳ್ಳುವ ಕಟ್ಟುನಿಟ್ಟಿನ ಕ್ರಮವೇನು'

ಗೌರಿಬಿದನೂರು ತಾಲ್ಲೂಕಿನ ಕೆಲವು ಹಳ್ಳಿಗಳು ಆಂದ್ರಪ್ರದೇಶದ ಗಡಿ ಭಾಗದಲ್ಲಿರುತ್ತದೆ. ಈ ಹಳ್ಳಿಗಳಿಗೆ ಅಕ್ರಮವಾಗಿ ಸೇಂದಿಯನ್ನು ತಂದು ಮಾರಾಟ ಮಾಡುತ್ತಿದ್ದ ಆಧಾರದ ಮೇಲೆ ಅಬಕಾರಿ ಇಲಾಖಾ ಅಧಿಕಾರಿಗಳು ಧಾಳಿ ನಡೆಸಿ ಹನ್ನೊಂದು ಮೊಕದ್ದಮೆಗಳನ್ನು ದಾಖಲು ಮಾಡಿರುತ್ತಾರೆ. ಕರ್ನಾಟಕ ಅಬಕಾರಿ ಕಾಯ್ದೆ ಹಾಗೂ ನಿಯಮಗಳಡಿಯಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಯಾವುದೇ ರೀತಿಯಲ್ಲಿ ನಿರ್ಲಕ್ಷತೆ ವಹಿಸದೆ ಕಾನೂನು ರೀತ್ಯಾ ಕ್ರಮ ಜರುಗಿಸುತ್ತಿದ್ದಾರೆ. ಹಾಗೂ ಮೊಕದ್ದಮೆ ಗಳನ್ನು ದಾಖಲು ಮಾಡಿ ಅಪರಾಧಿ ಗಳನ್ನು ನ್ಯಾಯಾಂಗ ವಶಕ್ಕೆ ನೀಡುತ್ತಿದ್ದಾರೆ. ಗಸ್ತು ಕಾರ್ಯ, ದಾಳಿ, ತನಿಖೆ ಇತ್ಯಾದಿಗಳನ್ನು ಕ್ರಮಬದ್ಧವಾಗಿ ನಡೆಸಿ ಅಕ್ರಮ ದಂಧೆಗೆ ತಡೆಯೊಡ್ಡುತ್ತಿದ್ದಾರೆ

ಇ) ಈ ದಂಧೆಗೆ ಕಾರಣವಾಗಿರುವ ಆಂಧ್ರ ಮೂಲದ ವ್ಯಕ್ತಿಯೊಬ್ಬರ ವಿರುದ್ಧ ಕೈಗೊಳ್ಳಲು ಉದ್ದೇಶಿಸಿರುವ ಕ್ರಮವೇನು;

ನೆರೆಯ ರಾಜ್ಯದ ಪೋಲೀಸ್ ಮತ್ತು ಅಬಕಾರಿ ಸಹಯೋಗದೊಂದಿಗೆ ಅಂತಹ ವ್ಯಕ್ತಿಯ ಬಗ್ಗೆ ಮಾಹಿತಿ ಪಡೆದು ಆತನನ್ನು ಪತ್ತೆ ಹಚ್ಚುವ ಕಾರ್ಯದಲ್ಲಿ ಅಧಿಕಾರಿಗಳು ಕಾರ್ಯನಿರತರಾಗಿರುತ್ತಾರೆ.

ಈ) ಈ ಅಕ್ರಮ ಹೆಂಡ ಮಾರಾಟದ ದಂಧೆಯನ್ನು ಸಂಪೂರ್ಣವಾಗಿ ನಿಲ್ಲಿಸಲು ಸರ್ಕಾರವು ಕೈಗೊಳ್ಳುವ ಕ್ರಮವೇನು?